ಕರ್ನಾಟಕ ಸರ್ಕಾರ

# ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ,

ಆನಂದರಾವ್ ವೃತ್ತ, ಬೆಂಗಳೂರು–560 009.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಹೈದರಾಬಾದ್–ಕರ್ನಾಟಕ ಪ್ರದೇಶದ 6 ಜಿಲ್ಲೆಗಳಲ್ಲಿ ಖಾಲಿ ಇರುವ 1582 ಗ್ರೂಪ್ 'ಡಿ'ಹುದ್ದೆಗಳಿಗೆ ನೇಮಕಾತಿ ಮಾಡುವ ಬಗ್ಗೆ.

## ಅಧಿಸೂಚನೆ

ಅಧಿಸೂಚನೆ ಸಂಖ್ಯೆ: ಎಸ್‌ಆರ್‌ಸಿ/91/2014–15 ದಿನಾಂಕ: **20.03.2015**

ಅರ್ಜಿಗಳನ್ನು ಆನ್–ಲೈನ್ ಮೂಲಕ **01.04.2015** ರಿಂದ ಕೊನೆಯ ದಿನಾಂಕ: **30.04.2015** (ಸಂಜೆ 05:00 ಗಂಟೆಯವರೆಗೆ) ರವರೆಗೆ ಸಲ್ಲಿಸಬಹುದಾಗಿದೆ.

ಅಂಚೆ ಕಛೇರಿಯಲ್ಲಿ ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ: **02.05.2015** (ಮಧ್ಯಾಹ್ನ 3.00 ಗಂಟೆಯೊಳಗೆ)

ಸರ್ಕಾರದ ಆದೇಶ ಸಂಖ್ಯೆ ಆಕುಕ 289 ಹೆಚ್‌ಎಸ್‌ಎಂ 2014 ದಿನಾಂಕ: 16.02.2015 ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಹೈದರಾಬಾದ್–ಕರ್ನಾಟಕ ಪ್ರದೇಶದ 6 ಜಿಲ್ಲೆಗಳಲ್ಲಿ ಖಾಲಿ ಇರುವ 1582 ಗ್ರೂಪ್ 'ಡಿ' ಹುದ್ದೆಗಳನ್ನು ಕರ್ನಾಟಕ ನಾಗರೀಕ ಸೇವಾ(ಸಾಮಾನ್ಯ)ನಿಯಮಗಳು–2006 ರ ನಿಯಮ–10 ರನ್ವಯ ಭರ್ತಿಮಾಡಲು ಅನುಮೋದನೆ ನೀಡಿರುವ ಹಿನ್ನೆಲೆಯಲ್ಲಿ ರೂ. 9600–200–12000–250–13000–300–14200–350–14550 ರ ವೇತನ ಶ್ರೇಣಿಯಲ್ಲಿ ಗ್ರೂಪ್ 'ಡಿ' ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ವೆಬ್‌ಸೈಟ್ ವಿಳಾಸ **<u>www.karhfw.gov.in/drc.aspx</u>** ನಲ್ಲಿ **<u>ON-LINE</u>** ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

1. ಪದನಾಮ, ವೇತನ ಶ್ರೇಣಿ, ಹುದ್ದೆಗಳ ಸಂಖ್ಯೆ, ಅನುಸೂಚಿಯಲ್ಲಿ ನಿಗದಿಪಡಿಸಿರುವ ವಿದ್ಯಾರ್ಹತೆ ಮತ್ತು ವಯೋಮಿತಿ ವಿವರ ಈ ಕೆಳಕಂಡಂತಿದೆ.

| ಕ್ರಮ ಸಂಖ್ಯೆ | ಹುದ್ದೆಯ ಪದನಾಮ ವೇತನ ಶ್ರೇಣಿ ಮತ್ತು ಒಟ್ಟು ಹುದ್ದೆಗಳು | ನಿಗದಿಪಡಿಸಿರುವ ಕನಿಷ್ಠ ವಿದ್ಯಾರ್ಹತೆ (*) | ವಯೋಮಿತಿ |
|---|---|---|---|
| 1 | 2 | 3 | 4 |
| 1 | ಗ್ರೂಪ್ 'ಡಿ' 1582 ಖಾಲಿ ಹುದ್ದೆಗಳು.<br>**<u>ವೇತನ ಶ್ರೇಣಿ</u>**: ರೂ.9600–200–12000–250–13000–300–14200–350–14550 | ಎಸ್.ಎಸ್.ಎಲ್.ಸಿ/ 10ನೇ ತರಗತಿ/ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು. | ಕನಿಷ್ಠ :–18 ವರ್ಷಗಳು<br>ಗರಿಷ್ಠ :– ಸಾಮಾನ್ಯ ಅರ್ಹತೆ – 35 ವರ್ಷಗಳು,<br>ಪ್ರವರ್ಗ – II(ಎ), I(ಬಿ),III(ಎ), III(ಬಿ) – 38 ವರ್ಷಗಳು,<br>ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ– I – 40 ವರ್ಷಗಳು, |

<u>*ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 30 ಎಸ್‌ಆರ್‌ಆರ್ 2013 ದಿನಾಂಕ: 06.01.2014ರಲ್ಲಿ ಗ್ರೂಪ್ 'ಡಿ' ಹುದ್ದೆಗಳಿಗೆ ನಿಗದಿಪಡಿಸಿರುವ ಕನಿಷ್ಠ ವಿದ್ಯಾರ್ಹತೆ.</u>

<u>ಆಯ್ಕೆ ವಿಧಾನ:–</u>

ಅಭ್ಯರ್ಥಿಗಳು ನಿಗದಿಪಡಿಸಿರುವ ವಿದ್ಯಾರ್ಹತೆಯಲ್ಲಿ ಗಳಿಸಿರುವ ಅಂಕಗಳು ಮತ್ತು ಮೀಸಲಾತಿ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

## ಹೈದರಾಬಾದ್–ಕರ್ನಾಟಕ ಪ್ರದೇಶದಲ್ಲಿನ ಗ್ರೂಪ್ 'ಡಿ' ಹುದ್ದೆಗಳ ವರ್ಗೀಕರಣ–1183 ಹುದ್ದೆಗಳು (ಸ್ಥಳೀಯ)

| ಪ್ರವರ್ಗ | ಸಾಮಾನ್ಯ | ಮಹಿಳಾ | ಗ್ರಾಮೀಣ | ಮಾಜಿ ಸೈನಿಕ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತರು | ಅಂಗವಿಕಲರು | | | | ಒಟ್ಟು |
|---|---|---|---|---|---|---|---|---|---|---|---|
| | | | | | | | ಅಂಧರು / ದೃಷ್ಟಿ ಮಾಂದ್ಯ | ಶ್ರವಣ ದೋಷ | ಚಲನ ವಲನ | ಕುಷ್ಠರೋಗದಿಂದ ಗುಣಮುಖ ಹೊಂದಿದ/ಬುದ್ಧಿಮಾಂದ್ಯ/ಮಾನಸಿಕ ಅಸ್ವಸ್ಥತೆ | |
| ಸಾ.ಅ | 119 | 177 | 148 | 59 | 29 | 29 | 12 | 6 | 6 | 6 | 591 |
| ಪ.ಜಾ | 35 | 54 | 45 | 17 | 9 | 9 | 4 | 2 | 2 | 1 | 178 |
| ಪ.ಪಂ | 7 | 11 | 10 | 3 | 2 | 1 | 2 | – | – | – | 36 |
| ಪ್ರವರ್ಗ–1 | 10 | 15 | 12 | 4 | 2 | 2 | 2 | 1 | – | – | 48 |
| ಪ್ರ–2ಎ | 35 | 53 | 45 | 17 | 9 | 9 | 4 | 2 | 2 | 1 | 177 |
| ಪ್ರ–2ಬಿ | 10 | 14 | 12 | 4 | 2 | 2 | 2 | 1 | – | – | 47 |
| ಪ್ರ–3ಎ | 10 | 14 | 12 | 4 | 2 | 2 | 2 | 1 | – | – | 47 |
| ಪ್ರ–3ಬಿ | 12 | 18 | 15 | 5 | 3 | 3 | 2 | 1 | – | – | 59 |
| ಒಟ್ಟು | 238 | 356 | 299 | 113 | 58 | 57 | 33 | 13 | 9 | 7 | 1183 |

* ಹೈ-ಕ ಪ್ರದೇಶದಲ್ಲಿನ ಸ್ಥಳೀಯ ವೃಂದಕ್ಕೆ ನೌಕರರನ್ನು ವರ್ಗಾಯಿಸಿದ ನಂತರ ನಷ್ಟವಾದ ರೋಸ್ಟರ್ ಬಿಂದುಗಳಾದ ಪರಿಶಿಷ್ಟ ಪಂಗಡ-01 ಮತ್ತು ಪ್ರವರ್ಗ-3ಎ-01 ವೃಂದಕ್ಕೆ ಸೇರಿರುವ ಹುದ್ದೆಗಳನ್ನು ಸರಿದೂಗಿಸುವ ನಿಟ್ಟಿನಲ್ಲಿ ಸದರಿ ಪ್ರವರ್ಗಗಳಿಗೆ ಆದ್ಯತೆ ನೀಡಿ ಆಯ್ಕೆಮಾಡಲಾಗುವುದು.

**ಈ ಮೇಲಿನ ಹುದ್ದೆಗಳಿಗೆ ಹೈ-ಕ ಪ್ರದೇಶದಲ್ಲಿನ ಜಿಲ್ಲೆಗಳಲ್ಲಿನ ಅರ್ಹ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.**

## ಗ್ರೂಪ್ 'ಡಿ' ಹುದ್ದೆಗಳ ವರ್ಗೀಕರಣ–399 ಹುದ್ದೆಗಳು (ಹೈ.ಕ ಸ್ಥಳೀಯೇತರ)

| ಪ್ರವರ್ಗ | ಸಾಮಾನ್ಯ | ಮಹಿಳಾ | ಗ್ರಾಮೀಣ | ಮಾಜಿ ಸೈನಿಕ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತರು | ಅಂಗವಿಕಲರು | | | | ಒಟ್ಟು |
|---|---|---|---|---|---|---|---|---|---|---|---|
| | | | | | | | ಅಂಧರು /ದೃಷ್ಟಿ ಮಾಂದ್ಯ | ಶ್ರವಣ ದೋಷ | ಚಲನ ವಲನ | ಕುಷ್ಠರೋಗ ದಿಂದ ಗುಣಮುಖ ಹೊಂದಿದ/ಬುದ್ಧಿವ ಂತಾಂದ್ಯ/ಮಾನಸಿಕ ಅಸ್ವಸ್ಥತೆ | |
| ಸಾ.ಅ | 40 | 60 | 50 | 19 | 10 | 10 | 4 | 2 | 2 | 2 | 199 |
| ಪ.ಜಾ | 12 | 18 | 15 | 6 | 3 | 3 | 2 | 1 | – | – | 60 |
| ಪ.ಪಂ | 3 | 4 | 3 | 1 | – | – | 1 | – | – | – | 12 |
| ಪ್ರವರ್ಗ–1 | 3 | 5 | 5 | 1 | 1 | – | 1 | – | – | – | 16 |
| ಪ್ರ–2ಎ | 12 | 18 | 15 | 6 | 3 | 3 | 2 | 1 | – | – | 60 |
| ಪ್ರ–2ಬಿ | 3 | 5 | 5 | 1 | 1 | – | 1 | – | – | – | 16 |
| ಪ್ರ–3ಎ | 3 | 5 | 5 | 1 | 1 | – | 1 | – | – | – | 16 |
| ಪ್ರ–3ಬಿ | 4 | 6 | 5 | 2 | 1 | 1 | 1 | – | – | – | 20 |
| ಒಟ್ಟು | 80 | 121 | 103 | 37 | 20 | 17 | 13 | 4 | 2 | 2 | 399 |

**ಈ ಮೇಲಿನ ಹೈ-ಕ ಪ್ರದೇಶದ ಸ್ಥಳೀಯೇತರ ಹುದ್ದೆಗಳಿಗೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿನ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.**

ಟಿಪ್ಪಣಿ: ಪ್ರಕಟಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭಗಳಲ್ಲಿ ನೇಮಕಾತಿ ಪ್ರಾಧಿಕಾರದ ನಿರ್ಣಯಕ್ಕೆ ಒಳಪಟ್ಟಿರುತ್ತದೆ ಹಾಗೂ ಮೇಲೆ ಸೂಚಿಸಿರುವ ಎಲ್ಲಾ ಖಾಲಿ ಹುದ್ದೆಗಳು ಹೈದರಾಬಾದ್-ಕರ್ನಾಟಕ ಪ್ರದೇಶದ ಜಿಲ್ಲೆಗಳಾದ ಬೀದರ್, ಗುಲ್ಬರ್ಗ, ರಾಯಚೂರು, ಕೊಪ್ಪಳ, ಯಾದಗಿರಿ ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಮಾತ್ರ ಸೀಮಿತವಾಗಿರುತ್ತದೆ.

## ಅರ್ಜಿಯನ್ನು ಸಲ್ಲಿಸುವ ವಿಧಾನ ಮತ್ತು ಕೊನೆಯ ದಿನಾಂಕ

ಅರ್ಜಿಯನ್ನು ಕಡ್ಡಾಯವಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವೆಬ್ ಸೈಟ್ **www.karhfw.gov.in/drc.aspx**ನಲ್ಲಿ ಆನ್-ಲೈನ್ (ON LINE) ಮುಖಾಂತರವೇ ಸಲ್ಲಿಸಬೇಕು. ಹೆಚ್ಚಿನ ವಿವರಗಳಿಗೆ ಇಲಾಖೆಯ ವೆಬ್-ಸೈಟ್‌ನಲ್ಲಿ ಗಮನಿಸುವುದು.

1. **ಅರ್ಜಿಯ ಶುಲ್ಕ:-**

| | |
|---|---|
| ಸಾಮಾನ್ಯ ಅರ್ಹತೆ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | ರೂ. 300/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 | ರೂ. 100/- |

2. **ಅರ್ಜಿ ಶುಲ್ಕ ಪಾವತಿ ಮಾಡುವ ವಿಧಾನ :**

**www.karhfw.gov.in/drc.aspx** ನಲ್ಲಿ ON LINE ಮೂಲಕ ಅರ್ಜಿ ಸಲ್ಲಿಸಿದ ಕೂಡಲೇ ಅಭ್ಯರ್ಥಿಯು ಚಲನ್ ಪ್ರತಿಯನ್ನು ಡೌನ್-ಲೋಡ್ ಮಾಡಿಕೊಂಡು, ಅಂಚೆ ಕಛೇರಿಯ ಕೆಲಸದ ವೇಳೆಯೊಳಗೆ ಯಾವುದೇ ಎಲೆಕ್ಟ್ರಾನಿಕ್ ಅಂಚೆ ಕಛೇರಿಗಳಲ್ಲಿ (Computerised Post Offices Only) ಮಾತ್ರ e-payment ಮೂಲಕ ಅರ್ಜಿ ಶುಲ್ಕವನ್ನು ಅಂಚೆ ಕಛೇರಿಯ ಸೇವಾ ಶುಲ್ಕದೊಂದಿಗೆ ಸಂದಾಯ ಮಾಡಬಹುದಾಗಿರುತ್ತದೆ. ಕರ್ನಾಟಕದಲ್ಲಿ e-payment ಮೂಲಕ ಶುಲ್ಕವನ್ನು ಪಾವತಿಸಬಹುದಾದ ಅಂಚೆ ಕಛೇರಿಗಳ ವಿಳಾಸಗಳ ಪಟ್ಟಿಯನ್ನು ಅಧಿಸೂಚನೆಯೊಂದಿಗೆ ಅಭ್ಯರ್ಥಿಗಳ ಮಾಹಿತಿಗಾಗಿ ನೀಡಲಾಗಿದೆ. ಶುಲ್ಕವನ್ನು ಪಾವತಿಸದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಅಂಚೆ ಕಚೇರಿಯಲ್ಲಿ ಪಾವತಿಸಿದ ಮೂಲ ಚಲನ್ ಪ್ರತಿಯನ್ನು ದಾಖಲಾತಿ ಪರಿಶೀಲನಾ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು, ಬೇರೆ ಯಾವುದೇ ರೀತಿ ಶುಲ್ಕ ಪಾವತಿಸಿದ್ದಲ್ಲಿ ಸದರಿ ಅರ್ಜಿಯನ್ನು ಪರಿಗಣಿಸುವುದಿಲ್ಲ. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇಲಾಖೆಯು ನಡೆಸುವ ಇತರೆ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಆನ್-ಲೈನ್ ಅರ್ಜಿ ಸಲ್ಲಿಸುವಾಗ ತಾಂತ್ರಿಕ ತೊಂದರೆಗಳು ಕಂಡುಬಂದಲ್ಲಿ ಹೆಲ್ಪ್-ಲೈನ್ ಸಂಖ್ಯೆ 9343733051, 7483121852, 9739894823, ಗಳಿಗೆ ಕಛೇರಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ.

ಅರ್ಜಿ ಶುಲ್ಕ ಪಾವತಿಸುವ ಹೆಚ್ಚಿನ ಮಾಹಿತಿಗಳು ಅವಶ್ಯಕತೆ ಇದ್ದಲ್ಲಿ ಚಲನ್‌ನಲ್ಲಿ ನಮೂದಿಸಿರುವ ದೂರವಾಣಿ ಸಂಖ್ಯೆಗೆ ಅಂಚೆ ಕಛೇರಿಯ ಕೆಲಸದ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ.

ಅಭ್ಯರ್ಥಿಗಳಿಗೆ ನೀಡಿರುವ ಸೂಚನೆಗಳಲ್ಲಿ ಮೀಸಲಾತಿ,ವಿದ್ಯಾರ್ಹತೆ ಮುಂತಾದ ವಿಷಯಗಳ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಕಛೇರಿಯ ಕೆಲಸದ ವೇಳೆಯಲ್ಲಿ ದೂರವಾಣಿ ಸಂಖ್ಯೆ 080-22251995, 9945895663 ಗೆ ಸಂಪರ್ಕಿಸಿಬಹುದಾಗಿದೆ.

**3..1 ಅರ್ಜಿ ಸಲ್ಲಿಸುವ ಕೊನೆಯ ದಿನಗಳಲ್ಲಿ ಹೆಚ್ಚು ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಂಭವವಿರುವುದರಿಂದ ಸರ್ವರ್ ಜಾಮ್ ಆಗುವ ಸಾಧ್ಯತೆಗಳಿರುವ ಕಾರಣ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.**

* ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 01.04.2015

* ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 30.04.2015 (ಸಂಜೆ 5:00 ಗಂಟೆಯವರೆಗೆ).

* ಅಂಚೆಕಛೇರಿಯಲ್ಲಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ: 02.05.2015 (ಮಧ್ಯಾಹ್ನ 3.00ಗಂಟೆಯೊಳಗೆ)

3.2 ಮೇಲ್ಕಂಡ ಕೊನೆಯ ದಿನಾಂಕ ಮತ್ತು ಸಮಯದ ನಂತರ ಬರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

3.3 ಒಬ್ಬ ಅಭ್ಯರ್ಥಿ ಒಂದು ಅರ್ಜಿಯನ್ನು ಮಾತ್ರ ಸಲ್ಲಿಸಬಹುದಾಗಿದ್ದು ಒಮ್ಮೆ ಸಲ್ಲಿಸಿದ ಅರ್ಜಿಯನ್ನು ಯಾವುದೇ ಕಾರಣದಿಂದಲೂ ತಿದ್ದುಪಡಿ ಮಾಡಲು ಅವಕಾಶ ಇರುವುದಿಲ್ಲ. ಆದ್ದರಿಂದ ಅಭ್ಯರ್ಥಿಗಳು ಸೂಚನೆಗಳನ್ನು ಓದಿ, ಅರ್ಥ ಮಾಡಿಕೊಂಡ ನಂತರ ಅರ್ಜಿಯನ್ನು ಆನ್-ಲೈನ್‌ನಲ್ಲಿ ಭರ್ತಿ ಮಾಡಿ, ಭಾವಚಿತ್ರ ಹಾಗೂ ಸಹಿಯನ್ನು ಅರ್ಜಿಯೊಂದಿಗೆ ಅಪ್-ಲೋಡ್ ಮಾಡಿ ಸಲ್ಲಿಸತಕ್ಕದ್ದು. ಅಪ್-ಲೋಡ್ ಮಾಡಿ, ಅಂಚೆ ಕಚೇರಿ ಚಲನ್ ಪ್ರತಿಯನ್ನು ಮುದ್ರಿಸಿಕೊಂಡು ಅರ್ಜಿ ಶುಲ್ಕ ಪಾವತಿಸಿದ 48 ಗಂಟೆಗಳ ನಂತರ ಮುದ್ರಿತ ಅರ್ಜಿಯನ್ನು ಪಡೆದುಕೊಳ್ಳತಕ್ಕದ್ದು ಹಾಗೂ ಶುಲ್ಕ ಪಾವತಿಸಿದ ಅಂಚೆ ಕಚೇರಿ ಚಲನ್ ಪ್ರತಿಗಳನ್ನು ಅಭ್ಯರ್ಥಿಗಳು ತಮ್ಮ ಬಳಿ ಇಟ್ಟುಕೊಂಡು ಮೂಲ ದಾಖಲಾತಿಗಳ ಪರಿಶೀಲನಾಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸುವುದು.

3.4 **ಪ್ರಕಟಿಸಿರುವ ಹುದ್ದೆಗಳಿಗೆ ನಿಗದಿಪಡಿಸಿರುವ ಕನಿಷ್ಠ ಅರ್ಹತೆಯ ಅಂಕಪಟ್ಟಿಗಳು, ವಯೋಮಿತಿ, ಮೀಸಲಾತಿ, ವಾಸಸ್ಥಳದ ಪ್ರಮಾಣ ಪತ್ರ ಇತ್ಯಾದಿ ದಾಖಲೆಗಳನ್ನು ON-LINE ಮುಖಾಂತರ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಮೊದಲು ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದು ಅಭ್ಯರ್ಥಿಗಳು ಹೊಂದಿರಬೇಕು ಮತ್ತು ಮೂಲದಾಖಲಾತಿ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು.**

## 4. ಅರ್ಹತಾ ಷರತ್ತುಗಳು:-

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ನೇಮಕಾತಿ ಪ್ರಾಧಿಕಾರವು ಕಾದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ. ಅಂಗವಿಕಲರು ಯಾವುದೇ ಹುದ್ದೆಗೆ ನಿಗದಿಪಡಿಸಿದ ಕರ್ತವ್ಯ ಜವಾಬ್ದಾರಿಯನ್ನು ನಿರ್ವಹಿಸಲು ದೈಹಿಕವಾಗಿ ಸಮರ್ಥರೇ ಎಂಬುದನ್ನು ನೇಮಕಾತಿ ಪ್ರಾಧಿಕಾರವು ಪರಿಶೀಲಿಸಿ ದೃಢೀಕರಿಸಿದ ನಂತರವೇ ಅಭ್ಯರ್ಥಿಯ ಆಯ್ಕೆಯನ್ನು ಪರಿಗಣಿಸಲಾಗುವುದು.

**5. ಶೈಕ್ಷಣಿಕ ವಿದ್ಯಾರ್ಹತೆ:** ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ಅಧಿಸೂಚಿಸಿದ ಹುದ್ದೆಯ ಮುಂದೆ ಸೂಚಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಖಡ್ಡಾಯವಾಗಿ ಹೊಂದಿರಬೇಕು. ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು **On-line** ಅರ್ಜಿಯಲ್ಲಿ ಸ್ಪಷ್ಟವಾಗಿ ನಮೂದಿಸಬೇಕು.

**6. ವಯೋಮಿತಿ-:** ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ನಿಗದಿತ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

7. ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

(ಅ) ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು/ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(ಆ) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

ವಿವರಣೆ:– (1) ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ. ಮತ್ತು

(2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದ ವ್ಯಕ್ತಿ.

ಅಥವಾ

ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

ಅಥವಾ

ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:–

1) ನಿರಂತರ ಸೇವೆ ಸಲ್ಲಿಸಿದ ನಿವೃತ್ತಿ ಹೊಂದಿದ ಪಿಂಚಣಿದಾರರು.
2) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.
3) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

ವಿವರಣೆ:– ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗೆ ನೇಮಕ ಹೊಂದುವಂತಿಲ್ಲ.

(ಇ)ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು

(ಊ) ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು/ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು

(ಋ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು. (ಪ್ರಮಾಣ ಪತ್ರವನ್ನು ತಹಶೀಲ್ದಾರರಿಂದ ಪಡೆದು ಸಲ್ಲಿಸಬೇಕು).

(ೠ) ಅಭ್ಯರ್ಥಿಯು ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ 10 ವರ್ಷಗಳು.

ಉಪ ಕಂಡಿಕೆ 7.(ೠ) ರ ಮೇರೆಗೆ ವಯೋಮಿತಿಯ ಸಡಿಲಿಕೆಯನ್ನು ಕೋರುವ ಅಭ್ಯರ್ಥಿಯು ಜೀತ ಕಾರ್ಮಿಕನಾಗಿದ್ದು, ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದು ಅರ್ಜಿಯೊಂದಿಗೆ ಲಗತ್ತಿಸಬೇಕು.

## 8. ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು:-

ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು:-

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು:- ನಮೂನೆ 'ಡಿ'(**ಅನುಬಂಧ-1**)

ಆ) ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು:- ನಮೂನೆ 'ಇ'(**ಅನುಬಂಧ-2**)

ಇ) ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು:-ನಮೂನೆ 'ಎಫ್'(**ಅನುಬಂಧ-3**)

ಈ ) **ಹೈದರಾಬಾದ್-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳ ಮೀಸಲಾತಿಗೆ ಸಂಬಂಧಿಸಿದ ಅರ್ಹತಾ ಪ್ರಮಾಣ ಪತ್ರವನ್ನು ಸ್ಥಳೀಯ ಹುದ್ದೆಗಳಿಗೆ ಕೋರಿದ್ದಲ್ಲಿ** .(ಅನುಬಂಧ-9(ಎ) **ಅಥವಾ** 9(ಬಿ) **ಅಥವಾ** 9(ಸಿ))

ಉ) **ಹೈದರಾಬಾದ್-ಕರ್ನಾಟಕ ಪ್ರದೇಶ ಸ್ಥಳೀಯೇತರ ಹುದ್ದೆಗಳಿಗೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿನ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.**

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂದರೆ ಹಿಂದುಳಿದ ವರ್ಗಗಳ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳನ್ನು ಪಡೆದ ದಿನಾಂಕದಿಂದ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ ಐದು ವರ್ಷಗಳ ಅವಧಿಯೊಳಗಿರಬೇಕು, ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಅರ್ಹರಾದಲ್ಲಿ ಮಾತ್ರ ಸಾಮಾನ್ಯ ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವುದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಈ ಸೂಚನೆಗಳಲ್ಲಿ ತೋರಿಸಲಾಗಿದೆ. ಮೀಸಲಾತಿ ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ಅರ್ಜಿಯಲ್ಲಿ ಸಂಬಂಧಪಟ್ಟ ಅಂಕಣದಲ್ಲಿ ನಮೂದಿಸತಕ್ಕದ್ದು ಹಾಗೂ ಅದೇ ಪ್ರಮಾಣ ಪತ್ರವನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

## 9. ಗ್ರಾಮೀಣ ಅಭ್ಯರ್ಥಿ

ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 96 ಸೆನೆನಿ 2005 ದಿನಾಂಕ 10.08.2005 ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಅಭ್ಯರ್ಥಿಗಳು ನಮೂನೆ-2ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಬಯಸುವವರು ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ

ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ–2ರಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು ಮಾಡಿಸಿ ಪಡೆದಿಟ್ಟುಕೊಂಡಿರತಕ್ಕದ್ದು. ಮೂಲ ದಾಖಲಾತಿ ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಇತರೆ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಈ ಸೂಚನೆಗಳಿಗೆ ಅನುಬಂಧಿಸಲಾಗಿದೆ) (**ಅನುಬಂಧ**–4).

ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು ದೃಢೀಕರಿಸಲು ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ ನಮೂನೆ–1 (**ಅನುಬಂಧ–4 ರೊಂದಿಗೆ ಲಗತ್ತಿಸಿದೆ**).

**10. ಕನ್ನಡ ಮಾಧ್ಯಮ ಅಭ್ಯರ್ಥಿ**

ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೆಸೆನಿ 2001 ದಿನಾಂಕ 24–10–2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಈ ಸೂಚನೆಗಳಿಗೆ ಅನುಬಂಧಿಸಲಾಗಿದೆ) (**ಅನುಬಂಧ–5**).

**11. ಅಂಗವಿಕಲ ಅಭ್ಯರ್ಥಿ**

ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 52 ಎಸ್‌ಆರ್‌ಆರ್ 99 ದಿನಾಂಕ 29–11–2002ರ ಅನ್ವಯ ಸಮೂಹ 'ಸಿ' ಮತ್ತು 'ಡಿ' ಗುಂಪಿನ ಹುದ್ದೆಗಳಿಗೆ ಶೇಕಡ 5 ರಷ್ಟು ಹುದ್ದೆಗಳನ್ನು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೆಸೆನಿ 2005 ದಿನಾಂಕ 19–11–2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ **ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು** ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಮೂಲ ದಾಖಲಾತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ಕೋರಲು ಅರ್ಹರಿರುವುದಿಲ್ಲ, **ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು/ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲಾಗುವುದಿಲ್ಲ**. ಈ ಪ್ರಮಾಣ ಪತ್ರದ ನಮೂನೆಯನ್ನು ಈ ಸೂಚನೆಗಳಿಗೆ ಅನುಬಂಧಿಸಲಾಗಿದೆ. (**ಅನುಬಂಧ–6**).

**12. ಯೋಜನಾ ನಿರಾಶ್ರಿತ ಅಭ್ಯರ್ಥಿ**

ಸರ್ಕಾರಿ ಆದೇಶ ಡಿಪಿಎಆರ್ 23 ಎಸ್.ಆರ್.ಆರ್. 99 ದಿ:23–11–00ರಂತೆ ಯೋಜನೆಗಳಿಂದ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು ಸರ್ಕಾರಿ ಸುತ್ತೋಲೆ ಸಂಖ್ಯೆ: ಸಿಆಸುಇ 44 ಸೇಸೇನಿ ದಿನಾಂಕ 27–07–2001 ರಲ್ಲಿ ನಿಗದಿಪಡಿಲಾದ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಶೀಲ್ದಾರ್ ರವರಿಂದ ಆಸ್ತಿಯನ್ನು ಸ್ವಾದೀನಪಡಿಸಿಕೊಂಡಿರುವ ದಿನಾಂಕವನ್ನು ಸ್ಪಷ್ಟವಾಗಿ ನಮೂದಿಸಿರುವ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು (**ಅನುಬಂಧ**–7)

**13. ಅನುಚ್ಛೇದ 371 (ಜೆ) ರಂತೆ ಹೈದ್ರಾಬಾದ್– ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ.**

ಸ್ಥಳೀಯ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಹೈದರಾಬಾದ್–ಕರ್ನಾಟಕದಲ್ಲಿ ವಾಸವಾಗಿರುವ ಬಗ್ಗೆ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣಪತ್ರಗಳ ನೀಡಿಕೆ) ನಿಯಮಗಳು 2013 ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕೋರುವ ಅನುಬಂಧ–9(ಎ),9(ಬಿ) ಮತ್ತು 9(ಸಿ) ರಲ್ಲಿ ನೀಡಲಾದ ಯಾವುದಾದರೂ ಸಂಬಂಧಿಸಿದ ಒಂದು ನಿಗದಿತ ನಮೂನೆಯಲ್ಲಿಯೇ ಅರ್ಹತಾ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದಿಟ್ಟುಕೊಳ್ಳತಕ್ಕದ್ದು. ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಮೂಲದಾಖಲಾತಿ

ಸಮಯದಲ್ಲಿ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. **ಈ ಪ್ರಮಾಣ ಪತ್ರದ ನಮೂನೆಗಳನ್ನು ಅನುಬಂಧ-9(ಎ), 9(ಬಿ) ಮತ್ತು 9(ಸಿ) ರಲ್ಲಿ ಈ ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ.** ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಅರ್ಹತಾ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು. ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳು ಸ್ಥಳಿಯೇತರ ವೃಂದಕ್ಕೆ ಸೇರಿದ ಹುದ್ದೆಗಳಿಗೂ ಸಹ ಅರ್ಜಿ ಸಲ್ಲಿಸಬಹುದು.

*** ಅರ್ಜಿಯಲ್ಲಿ ಹೈ-ಕ ಮೀಸಲಾತಿ ಮತ್ತು ಇನ್ನಿತರೆ ಯಾವುದೇ ಮೀಸಲಾತಿಯನ್ನು ಕೋರದೆ ಇದ್ದಲ್ಲಿ, ನಂತರ ಪರಿಗಣಿಸಲಾಗುವುದಿಲ್ಲ.**

14 **ಕರ್ನಾಟಕದಲ್ಲಿ ವಾಸವಾಗಿರುವ ಬಗ್ಗೆ ದೃಢೀಕರಣ ಪತ್ರ**

ಸ್ಥಳಿಯೇತರ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕರ್ನಾಟಕದಲ್ಲಿ ವಾಸವಾಗಿರುವ ಬಗ್ಗೆ ಸಂಬಂಧಪಟ್ಟ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು

15 **ಸರ್ಕಾರಿ ಸೇವೆಯಲ್ಲಿರುವ ನೌಕರರಿಗೆ**

ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ನೌಕರರು (ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರಿಂದ ಪಡೆದಿಟ್ಟುಕೊಂಡಿರತಕ್ಕದ್ದು) (**ಅನುಬಂಧ-8.**)

16 **ವಿಶೇಷ ಸೂಚನೆಗಳು**

**ಈ ಕೆಳಕಂಡ ಸಂಬಂಧಿಸಿದ ದಾಖಲೆಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರತಕ್ಕದ್ದು.**

1) ಹುದ್ದೆಗೆ ನಿಗದಿಪಡಿಸಿದ ಶುಲ್ಕ(ಅರ್ಜಿಯನ್ನು ಭರ್ತಿ ಮಾಡಿದ ನಂತರ ಪಾವತಿಸತಕ್ಕದ್ದು)ಪಾವತಿ ರಸೀತಿ(ಚಲನ್ ಪತ್ರಿ).
2) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ವರ್ಗಾವಣೆ ಪ್ರಮಾಣ ಪತ್ರ/ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗವನ್ನು ಸಲ್ಲಿಸತ್ತಕದ್ದು ಹಾಗೂ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ವಯೋಮಿತಿ ಮೀರಿರಬಾರದು.
3) ನಿರಾಪೇಕ್ಷಣಾ ಪತ್ರ (**No Objection Certificate**)(ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳಿಗೆ)
4) ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗ್ಗೆ ಪ್ರಮಾಣ ಪತ್ರ / ಮಾಜಿ ಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಬಿಡುಗಡೆ ಹೊಂದಿರುವ ಕಾರಣಗಳ ಪ್ರಮಾಣ ಪತ್ರ (ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ ಅಥವಾ ಖಾಯಂ ಆಗಿ ಗಾಯಗೊಂಡಿರುವ ಪ್ರಮಾಣ ಪತ್ರ) (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
5) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಮತ್ತು ಪ್ರವರ್ಗ-3ಬಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ)
6) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
7) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
8) ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ವಯೋಮಿತಿ ಸಡಿಲಿಕೆಗಾಗಿ ಮೀಸಲಾತಿ ಕೋರಿದ್ದಲ್ಲಿ).
9) ವಿಧವೆಯಾಗಿದ್ದಲ್ಲಿ ತಹಶೀಲ್ದಾರಿಂದ ಮರು ಮದುವೆಯಾಗದಿರುವ ಬಗ್ಗೆ ಪ್ರಮಾಣ ಪತ್ರ (ವಯೋಮಿತಿ ಸಡಿಲಿಕೆಗಾಗಿ).
10) ಹೈ-ಕ ಪ್ರದೇಶದ ಸ್ಥಳೀಯ ವೃಂದಕ್ಕೆ ಮೀಸಲಾತಿ ಕೋರಿದ್ದಲ್ಲಿ ಸಕ್ಷಮ ಪ್ರಾಧಿಕಾರದ ಪ್ರಮಾಣ ಪತ್ರ.
11) ಕರ್ನಾಟಕದಲ್ಲಿ ವಾಸವಾಗಿರುವ ಬಗ್ಗೆ. ದೃಢೀಕರಣ ಪತ್ರ

**<u>ಸೂಚನೆಗಳು</u>**:–

(1) ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಅವರುಗಳ ನೇಮಕಾತಿ ಪ್ರಾಧಿಕಾರಿಗಳಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಅನುಮತಿ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ವಿವರಗಳನ್ನು ಅರ್ಜಿಯಲ್ಲಿ ನಮೂದಿಸತಕ್ಕದ್ದು.

(2) ಅರ್ಜಿಗಳನ್ನು ಭರ್ತಿ ಮಾಡಲು ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಅರ್ಜಿಗಳನ್ನು ಭರ್ತಿ ಮಾಡಲು ಕೊನೆಯ ದಿನಾಂಕವಾಗುವುದು.

(3) **<u>ಹುದ್ದೆಯ ಕರ್ತವ್ಯ ಮತ್ತು ಜವಾಬ್ದಾರಿಯ ಕಾರ್ಯನಿರ್ವಹಣೆ</u>**:– ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿರುವ ಹೈ-ಕ ಪ್ರದೇಶದಲ್ಲಿನ ಜಿಲ್ಲಾ ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರಗಳು, ತಾಲ್ಲೂಕು ಆಸ್ಪತ್ರೆಗಳು, ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿರುವ ಕ್ಲಿನಿಕಲ್ ಹಾಗೂ ನೈರ್ಮಲ್ಯ ಶುಚಿತ್ವ ಕಾರ್ಯಗಳನ್ನು ಒಳಗೊಂಡಂತೆ ಕಾರ್ಯನಿರ್ವಹಿಸಲು ಒಟ್ಟು 1582 ಗ್ರೂಪ್'ಡಿ' ಖಾಲಿ ಹುದ್ದೆಗಳಿಗೆ ವೇತನ ಶ್ರೇಣಿ ರೂ. 9600–200–12000–250–13000–300–14200–350–14550/–ರಲ್ಲಿ ನೇಮಕಾತಿ ಹೊಂದಿ ಕರ್ತವ್ಯ ನಿರ್ವಹಿಸುವ ಅಭ್ಯರ್ಥಿಗಳು ಆಸ್ಪತ್ರೆಗಳಲ್ಲಿನ ಸಹಾಯಕ್ಕೆ ಅಂದರೆ, ಆಸ್ಪತ್ರೆಗಳಲ್ಲಿ ಚಿಕಿತ್ಸೆಗೆ ಒಳಪಡುವ ರೋಗಿಗಳಿಗೆ, ಹೆರಿಗೆ ಸಮಯದಲ್ಲಿ, ಶಸ್ತ್ರಚಿಕಿತ್ಸಾ ಕೊಠಡಿಗಳಲ್ಲಿ ಉಪಕರಣಗಳನ್ನು ಸಂಸ್ಕರಿಸುವುದು, ಗಾಯಾಳುಗಳಿಗೆ ಬ್ಯಾಂಡೇಜ್ ಮಾಡುವುದು, ರೋಗಿಗಳನ್ನು ಕೊಠಡಿಗಳಿಗೆ ಸ್ಥಳಾಂತರಿಸುವುದು, ಮರಣೋತ್ತರ ಪರೀಕ್ಷೆಯಲ್ಲಿ ವೈದ್ಯರಿಗೆ ಸಹಾಯ ಮಾಡುವ ಕೆಲಸ ಹಾಗೂ ಆಸ್ಪತ್ರೆಗಳಲ್ಲಿ ನೈರ್ಮಲ್ಯ ಶುಚಿತ್ವದ ಕೆಲಸಗಳನ್ನು ಒಳಗೊಂಡಂತೆ ಗ್ರೂಪ್'ಡಿ' ಹುದ್ದೆಯ ಕೆಲಸ ಕಾರ್ಯಗಳನ್ನು ಹಾಗೂ ಸಂಬಂಧಪಟ್ಟ ವೈದ್ಯಾಧಿಕಾರಿಗಳು/ಆಡಳಿತ ವೈದ್ಯಾಧಿಕಾರಿಗಳು ಸೂಚಿಸುವ ಗ್ರೂಪ್'ಡಿ' ಗೆ ಸಂಬಂಧಿಸಿದ ಕರ್ತವ್ಯಗಳು ಮತ್ತು ಜವಾಬ್ದಾರಿಗಳನ್ನು ನಿರ್ವಹಿಸತಕ್ಕದ್ದು ಹಾಗೂ ವಿದ್ಯಾರ್ಹತೆ ಆಧಾರದ ಮೇಲೆ ವೃಂದ ಬದಲಾವಣೆಗೆ ಅವಕಾಶವಿರುವುದಿಲ್ಲ.

17 **<u>ದುರ್ನಡತೆ</u>**:– ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾಗುವ ವೈದ್ಯಕೀಯ ಪರೀಕ್ಷೆಯಲ್ಲಿ / ಮೂಲ ದಾಖಲಾತಿ ಪರಿಶೀಲನೆ ಸಮಯದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು/ ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

H. C. Ramu

**ನಿರ್ದೇಶಕರು**

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು**

ಪ್ರತಿಯನ್ನು:–

1. ನಿರ್ದೇಶಕರು, ಉದ್ಯೋಗ ಮತ್ತು ತರಬೇತಿ, ಕೌಶಲ್ಯ ಭವನ, ಬನ್ನೇರುಘಟ್ಟ ರಸ್ತೆ, ಡೈರಿ ವೃತ್ತ, ಬೆಂಗಳೂರು ಇವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದ್ದು, ತಮ್ಮಲ್ಲಿ ನೊಂದಣಿಯಾಗಿರುವ ಅಭ್ಯರ್ಥಿಗಳಿಗೆ ಜಾಹಿರಾತಿಗೆ ಸ್ಪಂದಿಸಿ ಅರ್ಜಿ ಸಲ್ಲಿಸುವಂತೆ ತಿಳುವಳಿಕೆ ನೀಡಲು ಕೋರಲಾಗಿದೆ.
2. ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ (ಎನ್‌ಫೋರ್ಸ್‌ಮೆಂಟ್ ಸೆಲ್) 4ನೇಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು ಇವರ ಮಾಹಿತಿಗಾಗಿ.
3. ನಿರ್ದೇಶಕರು, ಹಿಂದುಳಿದ ವರ್ಗಗಳ ಇಲಾಖೆ, ನಂ.16'ಡಿ' ದೇವರಾಜ ಅರಸು ಭವನ, ವಸಂತನಗರ, ಮಿಲ್ಲರ್ಸ್‌ಕೆರೆ ಅಂಗಳ, ಬೆಂಗಳೂರು–52
4. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, 2ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಜಿಲ್ಲಾ ಆರೋಗ್ಯ ಮತ್ತು ಕು.ಕ ಅಧಿಕಾರಿಗಳು, ಗುಲ್ಬರ್ಗ/ಬಳ್ಳಾರಿ/ರಾಯಚೂರು/ಕೊಪ್ಪಳ/ಯಾದಗಿರಿ/ಬೀದರ್ ಇವರ ಮಾಹಿತಿಗಾಗಿ ಮತ್ತು ನಿಮ್ಮ ಜಿಲ್ಲೆಯಲ್ಲಿ ಈ ಅಧಿಸೂಚನೆಯ ಬಗ್ಗೆ ಸಂಕ್ಷಿಪ್ತವಾಗಿ ಪ್ರಾದೇಶಿಕ ದಿನಪತ್ರಿಕೆಗಳಲ್ಲಿ ಹಾಗೂ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಚಾರಪಡಿಸಲು ಈ ಮೂಲಕ ಸೂಚಿಸಲಾಗಿದೆ.

## ಅನುಬಂಧ-1

(ಪ.ಜಾ. / ಪ.ಪಂ.ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ - ಡಿ

(ನಿಯಮ 3ಎ(2) (3) ನ್ನು ನೋಡಿ)

ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ.

ಪ್ರಮಾಣ ಪತ್ರ

__________ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * __________ ಜಿಲ್ಲೆಯ / ವಿಭಾಗದ _____ ಗ್ರಾಮ / ಪಟ್ಟಣ * ನಿವಾಸಿಯಾದ ಶ್ರೀ / ಶ್ರೀಮತಿ _____. ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ _____ ಇವರು ಅನುಸೂಚಿತ ಜಾತಿ / ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ / ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

- ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
- ಸಂವಿಧಾನ ( ಅನುಸೂಚಿತ ಬುಡಕಟ್ಟುಗಳು) ಆದೇಶ 1950
- ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ,1950.
- ಸಂವಿಧಾನ ( ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಢಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956 , ಮುಂಬಾಯಿ ರಾಜ್ಯ, ಪುನರ್ ರಚನಾ ಅಧಿನಿಯಮ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971 ರ ಮೂಲಕ ತಿದ್ದುಪಡಿಯಾದಂತೆ).

- ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ 1956.
- ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976 ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ ( ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟು ಆದೇಶ 1959.
- ಸಂವಿಧಾನ (ದಾದರ್ ಮತ್ತು ನಗರ ಹವೇಲಿ ) ಅನುಸೂಚಿತ ಜಾತಿಗಳ ಆದೇಶ, 1962.
- ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964.
- ಸಂವಿಧಾನ ಅನುಸೂಚಿತ ಬುಡಕಟ್ಟುಗಳ (ಉತ್ತರ ಪ್ರದೇಶ) ಆದೇಶ1967.
- ಸಂವಿಧಾನ (ಗೋವಾ , ದಮನ್ ಮತ್ತು ದೀವ್) ಅನುಸೂಚಿತ ಜಾತಿ / ಬುಡಕಟ್ಟುಗಳ ಆದೇಶ,1988.
- ಸಂವಿಧಾನ (ನಾಗಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

1. ಶ್ರೀ/ ಶ್ರೀಮತಿ ಕುಮಾರಿ * __________ ಮತ್ತು / ಅಥವಾ ಅವನ*/ಅವಳ* ಕುಟುಂಬವು __________ ರಾಜ್ಯ/ಕೇಂದ್ರಾಡಳಿತ ಪ್ರದೇಶದ __________ ಜಿಲ್ಲಾ / ವಿಭಾಗದ * __________..ಗ್ರಾಮ / __________ ಪಟ್ಟಣದ ಸಾಮಾನ್ಯ ನಿವಾಸಿ (ಗಳು).

ಸಹಿ:

ತಹಶೀಲ್ದಾರ್

ಸ್ಥಳ :

ದಿನಾಂಕ :

ಪದನಾಮ

ಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ *

ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟುಬಿಡಿ / ಹೊಡೆದು ಹಾಕಿ,

ಸೂಚನೆ: – ಇಲ್ಲಿ ಉಪಯೋಗಿಸಿದ " ಸಾಮಾನ್ಯ ನಿವಾಸಿಗಳು" ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950 ರ 20 ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತವೆ.

ಭಾರತ ಸರ್ಕಾರದ ಪತ್ರ ಸಂಖ್ಯೆ : ಬಿಸಿ 12028/2/78 ಎಸ್ ಸಿಟಿ ಗೃಹ ಮಂತ್ರಾಲಯದ ಅನುಸಾರವಾಗಿ, ಉಚಿಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ: 13/02/1974 ಇಎಸ್ ಟಿ) ದಿನಾಂಕ 5ನೇ ಆಗಸ್ಟ್ 1975 ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು, ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೇಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

## ಅನುಬಂಧ–2

(ಪ್ರವರ್ಗ – 1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಇ

(ನಿಯಮ 3ಎ (2) (3) ನ್ನು ನೋಡಿ)

ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

__________.ಗ್ರಾಮ/ಪಟ್ಟಣ/ನಗರದ ನಿವಾಸಿಯಾದ ಶ್ರೀ./ಶ್ರೀಮತಿ __________ ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ/ ಶ್ರೀಮತಿ __________.ಇವರು ಹಿಂದುಳಿದ ವರ್ಗಗಳ (ಪ್ರವರ್ಗ) __________ ಜಾತಿಯ __________ ಉಪ ಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :
ದಿನಾಂಕ :

ತಹಸೀಲ್ದಾರರು
__________.ತಾಲ್ಲೂಕು
ಕಛೇರಿಯ ಮೊಹರು.

# ಅನುಬಂಧ-3

(ಪ್ರವರ್ಗ -2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ - ಎಫ್

(ನಿಯಮ 3ಎ (2) (3) ನ್ನು ನೋಡಿ)

ಪ್ರವರ್ಗ - 1 ರ ಹೊರತಾಗಿ , ಹಿಂದುಳಿತ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ

__________ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ __________ಇವರ ಮಗ/ಮಗಳು/ಪತಿ/ಪತ್ನಿಯಾದ, ಶ್ರೀ/ ಶ್ರೀಮತಿ / ಕುಮಾರಿ __________ಇವರು ಮತ್ತು ಆತನ / ಅವಳ ತಂದೆ ತಾಯಿ/ಪೋಷಕರು/ ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ : ಎಸ್ ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ : 30-03-2002 ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರೀಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು :

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ/ ಪೋಷಕರಾಗಲಿ / ಪತ್ನಿ/ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು :

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನದ ಹುದ್ದೆಯನ್ನು ಹೊಂದಿರುವುದಿಲ್ಲ:

ಅಥವಾ

ಖಾಸತಿ ನಿಯೋಜಕರ ಕೈಕೆಳಗೆ , 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ ( ವೇತನ ಶ್ರೇಣಿ ರೂ 6000-12000/- ಪ್ರಾರಂಭಿಕ ಹಂತ) ಕಡಿಮೆಯಿಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು :

ಅಥವಾ

ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ/ ಪತಿಯ ಆದಾಯವೂ ಎರಡು ಲಕ್ಷ ಮೀರಿರುವುದಿಲ್ಲವೆಂದು :

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ/ಪತ್ನಿ/ಪತಿಯು ಅಥವಾ ಇವರಿಬ್ಬರೂ 10 ಯುನಿಟ್ ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಷನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ : ಎಸ್ ಡ ಬ್ಲ್ಯೂ ಡಿ 225 ಬಿಸಿಎ 2000 ದಿನಾಂಕ : 30/03/2002 ರ ಅನ್ವಯ ಶ್ರೀ / ಶ್ರೀಮತಿ / ಕುಮಾರಿ ________ ಇವರು ________..ಜಾತಿಗೆ ________ ಸೇರಿದ ಉಪಜಾತಿಯವರಾಗಿದ್ದು, ಸರ್ಕಾರಿ ಆದೇಶ ಸಂಖ್ಯೆ : ಎಸ್‌ಡಬ್ಲೂಡಿ 225 ಬಿಸಿಎ 2000 ದಿನಾಂಕ : 30-03-2002 ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ________..(2ಎ, 2ಬಿ, 3ಎ, 3ಬಿ) ಸೇರಿರುತ್ತಾರೆ.

ಸ್ಥಳ :

ದಿನಾಂಕ :

ತಹಸೀಲ್ದಾರರು

________..ತಾಲ್ಲೂಕು

ಕಛೇರಿಯ ಮೊಹರು.

## ಅನುಬಂಧ-4

ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 96 ಸೇನನಿ 2005, ದಿನಾಂಕ 10-08-2005

ನಮೂನೆ-2

ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ____________________ರವರ ಮಗ/ಮಗಳು/ಪತಿ/ಪತ್ನಿ ಶ್ರೀ/ಶ್ರೀಮತಿ ಕುಮಾರಿ ____________ ಜಿಲ್ಲೆ ___________________ತಾಲ್ಲೂಕು ______________ಗ್ರಾಮದಲ್ಲಿ ___________ವಾಸವಾಗಿರುವ ಇವರು ಒಂದನೇ ತರಗತಿಯಿಂದ ___________ ತರಗತಿಯವರೆಗೆ _______ ಜಿಲ್ಲೆ _____ ತಾಲ್ಲೂಕು __________ ಪಟ್ಟಣ ಶಾಲೆಯಲ್ಲಿ ವ್ಯಾಸಂಗ ಮಾಡಿ ________ ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕದ ಪೌರನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

(ಸಹಿ)
ಮುಖ್ಯೋಪಾಧ್ಯಾಯರು.

ಮೇಲುರುಜು

ಕ್ಷೇತ್ರ ಶಿಕ್ಷಣ ಅಧಿಕಾರಿ

---

ನಮೂನೆ - 1

**ಸಾಮಾನ್ಯ ವರ್ಗದ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ.**

**(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)**

ಇವರಿಗೆ:
ತಹಸೀಲ್ದಾರರು
__________ ತಾಲ್ಲೂಕು
__________ ಜಿಲ್ಲೆ.

ಮಾನ್ಯರೆ,

ಶ್ರೀ / ಶ್ರೀಮತಿ ____________________ ಎಂಬುವವರ ಮಗ/ಮಗಳು/ಪತಿ/ಪತ್ನಿ _______ ಆದ ನಾನು ಮೇಲುಸ್ತರದಲ್ಲಿ (creamy layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :

ತಾಲ್ಲೂಕು :
ಜಿಲ್ಲೆ :

3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :

1. ಅಭ್ಯರ್ಥಿಯ ತಂದೆ/ತಾಯಿ/ ಪೋಷಕರ ಪತಿಯ/
ಪತ್ನಿಯ ಹೆಸರು ಮತ್ತು ಉದ್ಯೋಗ:
(ಉದ್ಯೋಗವು ಸರ್ಕಾರಿ/ ಅರೆ ಸರ್ಕಾರಿ/ ಸಾರ್ವಜನಿಕ ಉದ್ಯಮ / ಖಾಸಗಿ)
2. ಅಭ್ಯರ್ಥಿಯ ಪ್ರಸ್ತುತ ವಿಳಾಸ

(ಸ್ಪಷ್ಟವಾಗಿ ನಮೂದಿಸುವುದು)
3. ಅಭ್ಯರ್ಥಿಯ ಖಾಯಂ ವಿಳಾಸ
4. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
ಪ್ರಾಥಮಿಕ
ಮಾಧ್ಯಮಿಕ
ಪ್ರೌಢ
5. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/
ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ
ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:
i) ವೇತನ ಶ್ರೇಣಿ
ii) ಜಮೀನಿನ ವಿವರ
iii) ಇತರ ಮೂಲಗಳು
6. ಆದಾಯ ತೆರಿಗೆ ಪಾವತಿದಾರರೇ?
7. ಸಂಪತ್ತು ತೆರಿಗೆ ಪಾವತಿದಾರರೇ?
8. ಮಾರಾಟ ತೆರಿಗೆ ಪಾವತಿದಾರರೇ?

**ಪ್ರಮಾಣೀಕೃತ ಘೋಷಣೆ**

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ತಮ್ಮ ವಿಧೇಯ,

ಸ್ಥಳ:
ದಿನಾಂಕ:

(ಅಭ್ಯರ್ಥಿಯ ಸಹಿ)

**ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.**

**ತಂದೆ/ತಾಯಿ/ಪೋಷಕರ ಸಹಿ.**
**(ತಂದೆ/ತಾಯಿ ಜೀವಂತವಿಲ್ಲದಿದ್ದರೆ)**
**(ಹೆಂಡತಿ/ ಗಂಡ/ ಇವರ ಸಹಿ)**

**ಸ್ಥಳೀಯ ಇಬ್ಬರು ಸಾಕ್ಷಿದಾರರು :**

**ಅಭ್ಯರ್ಥಿಯು ಮತ್ತು ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.**
**ಸಾಕ್ಷಿದಾರರ ಸಹಿ:**

1)

2)

**(ಪೂರ್ಣ ವಿಳಾಸದೊಂದಿಗೆ)**

**ಪರಿಶೀಲನಾ ಪ್ರಮಾಣ ಪತ್ರ**

**1. ಶ್ರೀ / ಶ್ರೀಮತಿ ____________________ ಎಂಬುವವರ ಮಗ/ಮಗಳು/ಪತಿ/ಪತ್ನಿ ಶ್ರೀ/ ಶ್ರೀಮತಿ / ಕುಮಾರಿ _______ ಎಂಬುವವರು ಕರ್ನಾಟಕ ರಾಜ್ಯದ __________ ಜಿಲ್ಲೆಯ ವಿಭಾಗ _____________________ ಗ್ರಾಮ/ ಪಟ್ಟಣ / ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆಂದು ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ. ಶ್ರೀ / ಶ್ರೀಮತಿ / ಕುಮಾರಿ__________ ಇವರ ತಂದೆ /ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ:ಎಸ್‌ಡಬ್ಲ್ಯೂಡಿ**

251 ಬಿಸಿಪಿ 94, ಬೆಂಗಳೂರು, ದಿನಾಂಕ: 31-01-1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (**creamy layer**) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :
ದಿನಾಂಕ:

ತಹಸೀಲ್ದಾರರು
_______ ತಾಲ್ಲೂಕು
ಕಛೇರಿಯ ಮೊಹರು.

---

ಸೂಚನೆ-1: ಇದರಲ್ಲಿ ಉಪಯೋಗಿಸಲಾದ " ಸಾಮಾನ್ಯ ನಿವಾಸಿ " ಎಂಬ ಪದವು 1950 ರ ಜನತಾ ಪ್ರಾತಿನಿಧ್ಯ ಕಾಯಿದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

ಸೂಚನೆ 2: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲೂಡಿ 251 ಬಿಸಿಪಿ 94, ಬೆಂಗಳೂರು, ದಿನಾಂಕ:31-01-1995 ರನ್ವಯ ಮೇಲುಸ್ತರ **(creamy layer)**

---

## ಅನುಬಂಧ-5

## ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ/ಶ್ರೀಮತಿ________________________________________ ರವರ ಮಗ/ಮಗಳು/ಪತ್ನಿ ಶ್ರೀ/ ಶ್ರೀಮತಿ ಕುಮಾರಿ ________________________ಜಿಲ್ಲೆ _________________ ತಾಲ್ಲೂಕು ______ ಗ್ರಾಮದಲ್ಲಿ __________________ವಾಸವಾಗಿರುವ ಇವರು _________________ತರಗತಿಯಿಂದ _______________ತರಗತಿಯವರೆಗೆ _______________ಶೈಕ್ಷಣಿಕ ವರ್ಷದಿಂದ ___________ ಶೈಕ್ಷಣಿಕ ವರ್ಷದವರೆಗೆ _____________________ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದೂ ಪ್ರಮಾಣೀಕರಿಸಲಾಗಿದೆ.

ಮುಖ್ಯೋಪಾಧ್ಯಾರ ಸಹಿ ಮತ್ತು ಸಂಸ್ಥೆಯ ಮೊಹರು.

ದಿನಾಂಕ: _____________
ಸ್ಥಳ :_______________

**ಸೂಚನೆ** :- ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಶಾಲೆಗಳಲ್ಲಿ ವ್ಯಾಸಂಗ ಮಾಡಿದ್ದಲ್ಲಿ ಶಾಲಾವಾರು ಪ್ರತ್ಯೇಕ ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ ಸಲ್ಲಿಸಬೇಕು.

---

## ಅನುಬಂಧ–6

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ 19-11-2005

### CERTIFICATE FOR THE PERSONS WITH DISABILITIES

This is to certify that Sri/ Smt / Kum.................................................. Son / wife/ Daughter of Shri .............................. Age............ old, male / female, Registration No................ is a case of ..................................................... He / She is physically disabled / visual disabled / speech & hearing disabled and has ........ % ......... percent) permanent(Physical impairment/ visual impairment speech & hearing impairment) in relation to his / her....... ..........................

Note:

1. This condition is progressive / non progressive likely to Improve / not likely to improve.
2. Re-assessment is not recommended / is recommended after a Period of ................ months / years.

* Strike out which is not applicable

Recent attested
Photograph showing
The disability
Affixed here)

| Sd/<br>DOCTOR<br>(Seal) | Sd/<br>DOCTOR<br>(Seal) | Sd/<br>DOCTOR<br>(Seal) |
|---|---|---|

Countersigned by the
Medical Superintendent CMO Head of
Hospital (with seal)

Signature/Thumb impression
of the disabled person.
Date:

Date:

**Explanation:-** As per Notification No. DPAR 50 SRR 2000 dated 03-09-2005 "Physically Handicapped candidates " or " person with disability " means a person suffering from not less than forty percent of any of the following disabilities :- (1) Blindness (2) Low Vision (3) Hearing impairment (4) Locomotor disability (5) Leprosy cured (6) Mental retardation (7) Mental illness.

(1)Blindness refers to a condition where a person suffers from any of the following conditions, namely:- (a)Total absence of sight; or (b) Visual acuity not exceeding 6/60 or 20/200 (Snellen) in the better eye with correcting lenses; or (c) limitation of the field of vision subtending an angle of 20 degree or worse;(2) Person with low vision means a person with impairment of visual functioning even after treatment or standard refractive correction, but who uses or is potentially capable of using vision for the planning or execution of a task with appropriate assistive device;(3)" Hearing impairment" means loss of sixty decibels or more in the better ear in the conversational range of frequencies.(4)" Locomotor disability" means disability of the bones, joints or muscles leading to substantial restriction of the movement of the limbs or any form of cerebral palsy.(5) Leprosy cured:-means any person who has been cured of Leprosy, but is suffering from, (i) Loss of sensation in hands or feet as well as loss of sensation & paresis in the eye & eyelid, but with no manifest deformity;(ii)manifest deformity & paresis but having sufficient mobility in their hands & feet to enable them to engage in normal economic activity; (iii) extreme physical deformity as well as advanced age which prevents him from undertaking any gainful occupation; and the expressesion " Leprosy cured " shall be construed accordingly; (6) Mental Retardation:-means a condition of arrested or incomplete development of mind of a person who is specially characterised by sub normality of intelligence; (7) Mental Illness:- means any mental disorder other than mental retardation.

## ಅನುಬಂಧ-7

ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 23 ಎಸ್‌ಆರ್‌ಆರ್ 99, ದಿನಾಂಕ: 23-11-2000

**ನಮೂನೆ**

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿ

**ಪ್ರಮಾಣ ಪತ್ರ**

ಶ್ರೀ/ಶ್ರೀಮತಿ --------------- ಎಂಬುವವರ ಮಗ/ಮಗಳು/ಪತಿ/ಪತ್ನಿ ಶ್ರೀ/ಶ್ರೀಮತಿ/ ಕುಮಾರಿ ------ ಜಿಲ್ಲೆ ---------- ---- ತಾಲ್ಲೂಕು ---------- ಗ್ರಾಮದಲ್ಲಿ ---------- ವಾಸವಾಗಿರುವ ಇವರು : ;ಇವರ ಕುಟುಂಬದವರು ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು --------------- ಯೋಜನೆಗಾಗಿ ----------------ಇಸವಿ--------- --ಯಂದು ಸ್ವಾಧೀನಪಡಿಸಿಕೊಳ್ಳಲಾಗಿದೆ. ಎಂದು ಈ ಮೂಲಕ ಪ್ರಮಾಣೀಕರಿಸಿದೆ:-

- ವಾಸಿಸುವ ಮನೆ ಮತ್ತು ತಾವು ಅವಲಂಬಿರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು:
- ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ : ಯೋಜನೆಯಿಂದ ತಾವು ವಾಸಿಸುವ ಮನೆ:
- ತಾವು ಅವಲಂಭಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಅದಕ್ಕಿಂತ ಕಡಿಮೆ ಕೃಷಿ ಭೂಮಿ:
- ಇತರ ಇನ್ನಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು

ತಹಸೀಲ್ದಾರ್
---------ತಾಲ್ಲೂಕು

(ಅನ್ವಯವಾಗುವ ಐಟಂನ್ನು ಮಾತ್ರ ಪ್ರಮಾಣ ಪತ್ರದಲ್ಲಿ ನಮೂದಿಸತಕ್ಕದ್ದು.)

## ಅನುಬಂಧ-8

### ರಾಜ್ಯ ಸರ್ಕಾರಿ/ ಕೇಂದ್ರ ಸರ್ಕಾರಿ ನೌಕರರು ಒದಗಿಸಬೇಕಾದ ಪ್ರಮಾಣ ಪತ್ರ

ಶ್ರೀ / ಶ್ರೀಮತಿ................................................................................ ರವರು ರಾಜ್ಯ / ಕೇಂದ್ರ ಸರ್ಕಾರದಲ್ಲಿ ________
........................................................(ಪದನಾಮ) .............................................................................................. ಇಲಾಖೆಯಲ್ಲಿ ಖಾಯಂ / ತಾತ್ಕಾಲಿಕ ಹುದ್ದೆಯನ್ನು ದಿನಾಂಕ ............................ ರಿಂದ .......................................... ರವರೆಗೆ ಹೊಂದಿರುವರು.. ಈ ಹುದ್ದೆಗೆ ಇವರು ನೇಮಕಾತಿ
ನಿಯಮಗಳಡಿ ಆಯ್ಕೆಯಾಗಿದ್ದು, ಸದರಿ ಹುದ್ದೆಗೆ ಅರ್ಜಿ ಸಲ್ಲಿಸಲು ಅವರಿಗೆ ಅನುಮತಿ ನೀಡಲಾಗಿದೆ.

ಸ್ಥಳ :
ದಿನಾಂಕ:

ನೇಮಕಾತಿ ಪ್ರಾಧಿಕಾರದ ಸಹಿ/
ಇಲಾಖೆಯ ಹೆಸರು ಮತ್ತು ಮೊಹರುನೊಂದಿಗೆ

### CERTIFICATE TO BE FURNISHED BY THE STATE/CENTRAL GOVT. SERVANTS

**Certified that Sri / Smt ........................................................holds a permanent / temporary post under the State/Central Govt. as ......................... (Designation) in the dept. of .........................from............................having been appointed therein under the rules of recruitment. He /She is permitted to apply for the said post.**

Place :
Date:

Signature of the appointing authority
of the department / with name and seal.

## ಅನುಬಂಧ – 9

(ಎ)

### ಅರ್ಹತಾ ಪ್ರಮಾಣ ಪತ್ರ

(ಅನುಚ್ಛೇಧ 371(ಜೆ)ಮೇರೆಗೆ)

(3(3)ನೇ ನಿಯಮ ನೋಡಿ)

(ಪ್ರಮಾಣ ಪತ್ರ ನೀಡಲು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ)
ನಿಯಮಗಳು 2013)

ಶ್ರೀ / ಶ್ರೀಮತಿ ______________________ ರವರು ______________________________
ರವರ ಮಗ / ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ ____________________ ಜಿಲ್ಲೆಯ ________________ ತಾಲ್ಲೂಕಿನ ____________________________ ಗ್ರಾಮ / ಪಟ್ಟಣದ ಸ್ಥಳೀಯ ವ್ಯಕ್ತಿಯಾಗಿದ್ದಾರೆ.

ಸ್ಥಳ: ______________________ ಹೆಸರು ______________________________

ದಿನಾಂಕ: ____________________ ಅಸಿಸ್ಟೆಂಟ್ ಕಮಿಷನರ್ ______________

____________________ ಉಪವಿಭಾಗ

____________________ ಜಿಲ್ಲೆ

ವಾಸಸ್ಥಳ ಪ್ರಮಾಣ ಪತ್ರ
ಅನುಬಂಧ-9
(ಬಿ)
[ಅನುಚ್ಛೇದ 371 (ಜೆ) ಮೇರೆಗೆ]
(ನಿಯಮ 4 (ಬಿ) (2) (ii) ನೋಡಿ)

[ಪ್ರಮಾಣಪತ್ರಗಳ ನೀಡಿಕೆಗಾಗಿ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು, 2013]

ಶ್ರೀ/ ಶ್ರೀಮತಿ ------------------ ರವರು ----------------ರವರ ಮಗ/ ಹೆಂಡತಿಯಾಗಿದ್ದು, ಇವರು ----------------- ಜಿಲ್ಲೆಯ --------------- ತಾಲ್ಲೂಕಿನ ---------- ----------------- ಗ್ರಾಮ / ಪಟ್ಟಣದ ಈ ಕೆಳಕಂಡ ವಿಳಾಸದಲ್ಲಿ ಕೆಳಗೆ ಸೂಚಿಸಿರುವ ಅವಧಿಯಲ್ಲಿ ವಾಸವಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ:

| ಕ್ರ. ಸಂ | ವಿಳಾಸ | ಯಾವ ದಿನಾಂಕದಿಂದ ಯಾವ ದಿನಾಂಕದವರೆಗೆ | ಸಾಕ್ಷ್ಯ ವಿವರ ( ಆಧಾರವಾಗಿಟ್ಟುಕೊಂಡಿರುವ ಸಾಕ್ಷ್ಯದ ಎಲ್ಲಾ ಪ್ರಮಾಣೀಕೃತ ಪ್ರತಿಗಳನ್ನು ಲಗತ್ತಿಸಿ) |
|---|---|---|---|
| 1 | | | |
| 2 | | | |
| 3 | | | |
| 4 | | | |
| 5 | | | |
| 6 | | | |

ಸಾಕ್ಷ್ಯದಲ್ಲಿ ಹೇಳಲಾದ ಎಲ್ಲಾ ಲಗತ್ತುಗಳನ್ನು ಕೋಷ್ಟಕದಲ್ಲಿ ಸಂಕ್ಷಿಪ್ತವಾಗಿ ಅಳವಡಿಸಿ

ಸ್ಥಳ: ---------------
ದಿನಾಂಕ: -------------

ಹೆಸರು -------------
ತಹಸೀಲ್ದಾರ್ ----------
---------------ತಾಲ್ಲೂಕು
----------------ಜಿಲ್ಲೆ

# ವ್ಯಾಸಂಗ ಪ್ರಮಾಣ ಪತ್ರ

**ಅನುಬಂಧ–9**

(ಸಿ)

[ಅನುಚ್ಛೇದ 371 9ಜೆ) ಮೇರೆಗೆ]

(ನಿಯಮ 4 (ಸಿ)(2)(ii) ನೋಡಿ)

**[ಪ್ರಮಾಣಪತ್ರಗಳ ನೀಡಿಕೆಗಾಗಿ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್– ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು, 2013]**

ಶ್ರೀ/ ಶ್ರೀಮತಿ ------------------ ರವರು ------------------------- ರವರ ಮಗ/ ಹೆಂಡತಿಯಾಗಿದ್ದು, ಇವರು --------------------- ಜಿಲ್ಲೆಯ ----------------------- ತಾಲ್ಲೂಕಿನ -------------------------- ಕಾಲೇಜು/ ಶಾಲೆಯಲ್ಲಿ ಈ ಕೆಳಗೆ ಸೂಚಿಸಲಾದ ಅವಧಿಯಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ:

| ಕ್ರ. ಸಂ. | ತರಗತಿ/ ಹಂತ | ಯಾವ ದಿನಾಂಕದಿಂದ ಯಾವ ದಿನಾಂಕದ ವರೆಗೆ | ದಾಖಲೆಯ ಉಲ್ಲೇಖ |
|---|---|---|---|
| | | | |

ಇವನು ಈ ಕೆಳಕಂಡ ವರ್ಷಗಳಲ್ಲಿ ಈ ಕೆಳಕಂಡ ಪರೀಕ್ಷೆಗಳಲ್ಲಿ ಉತ್ತೀರ್ಣನಾಗಿದ್ದಾನೆ/ ಅನುತ್ತೀರ್ಣನಾಗಿದ್ದಾನೆ.

| ಕ್ರ. ಸಂ. | ತರಗತಿ/ ಪರೀಕ್ಷೆ / ಹಂತದ ಹೆಸರು | ವರ್ಷ | ಅನುತ್ತೀರ್ಣ/ ಉತ್ತೀರ್ಣ | ದಾಖಲೆಯ ಉಲ್ಲೇಖ |
|---|---|---|---|---|
| | | | | |

ಸ್ಥಳ: -----------------

ದಿನಾಂಕ: --------------

ಹೆಸರು -----------------

ಸಂಸ್ಥೆಯ ಮುಖ್ಯಸ್ಥರು

## ಪ್ರಮಾಣ ಪತ್ರ

ಮೇಲೆ ನೀಡಲಾದ ಪ್ರಮಾಣಪತ್ರವು ಲಭ್ಯವಿರುವ ದಾಖಲೆಯ ಪ್ರಕಾರ ಸತ್ಯವಾಗಿದೆ ಎಂಬುದನ್ನು ನಾನು ಸ್ವತಃ ಮನವರಿಕೆ ಮಾಡಿಕೊಂಡಿದ್ದೇನೆಂದು ಪ್ರಮಾಣೀಕರಿಸುತ್ತೇನೆ.

ಸ್ಥಳ: ----------------

ದಿನಾಂಕ: -------------

ಹೆಸರು --------------

ಕ್ಷೇತ್ರ ಶಿಕ್ಷಣಾಧಿಕಾರಿ ----------

----------------ತಾಲ್ಲೂಕು

----------------ಜಿಲ್ಲೆ